# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 20.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ಮಂಜುಳಾ ಆರ್. | ವೈದ್ಯಾಧಿಕಾರಿಗಳ ಪರವಾಗಿ ಪ್ರಾ. ಆ. ಕೇಂ. | | ಹಾಜರಿದ್ದರು |
| 4 | ಶ್ರೀಮತಿ ರೇಣುಕಾ | ಕಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 5 | ಶ್ರೀ ಗೋವಿಂದರಾಜು | ಕಂದಾಯ ವಸೂಲಿಗಾರರು | ಸದಸ್ಯರು | ಹಾಜರಿದ್ದರು |
| 6 | ಶ್ರೀ ಅನಿಲ್ ಕುಮಾರ್ | ಸಹಾಯಕ ಅಭಿಯಂತರರು, ಬೆಸ್ಕಾಂ | ಸದಸ್ಯರು | ಹಾಜರಿದ್ದರು |
| 7 | ಶ್ರೀ ಲೋಕೇಶ್ ನಾಯಕ್ | ಮೇಲ್ವಿಚಾರಕರು ಬಿಡಬ್ಲ್ಯೂಎಸ್‌ಎಸ್‌ಬಿ | ಸದಸ್ಯರು | ಹಾಜರಿದ್ದರು |
| 8 | ತಿರುಪಾಲ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 9 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 10 | ಶ್ರೀ ಎಸ್. ಎಂ. ಶಿವಪ್ರಕಾಶ್ | ಬಿ.ಎಲ್.ಓ. ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 11 | ಗೌತಮ್ ರಾಜ್ | ಮಾರ್ಷಲ್ | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

<u>1) 2021-22ರ ಬಿಬಿಎಂಪಿ ಆಯವ್ಯಯದ ಕುರಿತು:-</u>

ಬಿ ಕೆ ನಗರ 1ನೇ ಮುಖ್ಯರಸ್ತೆ, 3ನೇ ಅಡ್ಡರಸ್ತೆಯಲ್ಲಿರುವ ಮಸೀದಿ ಪಕ್ಕದಲ್ಲಿ ಸಿ. ಸಿ. ಕ್ಯಾಮರಾಗಳನ್ನು ಅಳವಡಿಸಲು ಹಾಗೂ ವಾರ್ಡ್‌ನ ಚರಂಡಿಗಳನ್ನು ಅಭಿವೃದ್ಧಿಗೊಳಿಸಲು 2021-22ರ ಬಿಬಿಎಂಪಿ ಬಜೆಟ್‌ನಲ್ಲಿ ಸೇರಿಸಿಕೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಮಾನ್ಯ ಅಧ್ಯಕ್ಷರಲ್ಲಿ ಮನವಿ ಮಾಡಿದರು.

<u>2) ಆರೋಗ್ಯ ಇಲಾಖೆ:-</u>

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ವ್ಯಾಕ್ಸಿನ್ ನೀಡಲು ಪ್ರಾರಂಭಿಸಲಾಗಿದ್ದು, ವೈದ್ಯಾಧಿಕಾರಿಗಳ ಪರವಾಗಿ ಸಭೆಯಲ್ಲಿ ಹಾಜರಿದ್ದ ಮಂಜುಳಾರವರು ಮಾತನಾಡಿ, ಈವರೆಗೆ 170 ಜನರಿಗೆ ವ್ಯಾಕ್ಸಿನೇಷನ್ ಮಾಡಲಾಗಿದ್ದು, ಅದರಲ್ಲಿ ಆಸ್ಪತ್ರೆಯ ಸಿಬ್ಬಂದಿಗಳು, ಪೋಲಿಸ್ ಸಿಬ್ಬಂದಿಗಳು ಹಾಗೂ ಪೌರ ಕಾರ್ಮಿಕರಿಗೆ ನೀಡಲಾಗಿದೆ. ಯಶವಂತಪುರ ವಾರ್ಡ್‌ಗೆ ಸಂಬಂಧಪಟ್ಟ ಪಾಲಿಕೆ ಸಿಬ್ಬಂದಿಗಳಿಗೆ ಚುಚ್ಚುಮದ್ದು ಹಾಕಿಸಿಕೊಳ್ಳಲು ಸೂಚಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ವಾರ್ಡಿನ ನಗರ ಪಾಲಿಕೆ ಆಸ್ಪತ್ರೆಯಲ್ಲಿ ಸಾಂಕ್ರಾಮಿಕ ರೋಗವಾದ ಕೋವಿಡ್-19 ತಡೆಗಟ್ಟುವ ನಿಟ್ಟಿನಲ್ಲಿ 2ನೇ ಡೋಸ್ ಲಸಿಕೆ ನೀಡುವುದು ಇಂದಿನಿಂದ ಪ್ರಾರಂಭಿಸಲಾಗಿದೆ ಎಂದು ಮಂಜುಳಾರವರು ಸಭೆಗೆ ತಿಳಿಸಿದರು.

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಸ್ಪತ್ರೆ ವತಿಯಿಂದ ಹಿಂದಿನ ವಾರ ಎಸ್‌ಓಆರ್‌ಸಿ ಕ್ಯಾಂಪ್ ಹಮ್ಮಿಕೊಳ್ಳಲಾಗಿದ್ದು, ಸದರಿ ಆರೋಗ್ಯ ಶಿಬಿರವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದರು.

ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಟಮಿನ್ ಸಿ ಹಾಗೂ ವಿಟಮಿನ್ ಡಿ 3 ಔಷಧಿಯ ಕೊರತೆಯಿದ್ದು, ಸುಮಾರು ತಿಂಗಳಾದರೂ ಔಷಧಿಯನ್ನು ಪೂರೈಸಲು ಆರೋಗ್ಯ ಇಲಾಖೆ ಗಮನ ಕೊಡದೇ ಇರುವುದು ಕಂಡುಬಂದಿದ್ದು, ಕ್ರಮವಹಿಸಲು ಸೂಚಿಸಲಾಯಿತು.

ಯಶವಂತಪುರ ವಾರ್ಡ್‌ಗೆ ಸರ್ಕಾರ ನಿಗಧಿಪಡಿಸಿರುವ ಕೋವಿಡ್ ಟೆಸ್ಟ್‌ನ ಗುರಿಯು 106 ಆಗಿದ್ದು, ಪ್ರತಿದಿನವೂ ಸ್ವಇಚ್ಛೆಯಿಂದ ಶಾಲಾ ಹಾಗೂ ಕಾಲೇಜಿನ ಮಕ್ಕಳು, ಸರ್ಕಾರದ ವಿವಿಧ ಇಲಾಖೆಯ ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಕೋವಿಡ್ ಟೆಸ್ಟ್ ಮಾಡಿಸಿಕೊಳ್ಳುತ್ತಿದ್ದು, ಸರ್ಕಾರ ನಿಗಧಿಪಡಿಸಿರುವ ಗುರಿಗಿಂತ ಹೆಚ್ಚಾಗಿ ಕೋವಿಡ್ ಟೆಸ್ಟ್ ಯಶಸ್ವಿಯಾಗಿ ನಡೆಯುತ್ತಿರುವುದನ್ನು ಪ್ರಾಥಮಿಕ ಆರೋಗ್ಯ ಕೇಂದ್ರ ಸಿಬ್ಬಂದಿಯು ಹರ್ಷದಿಂದ ಸಭೆಗೆ ತಿಳಿಸಿದರು.

3) ಪೌರ ಕಾರ್ಮಿಕರ ಬಗ್ಗೆ:

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಲಿಂಕ್ ವರ್ಕರ್‌ಗಳು ಮೂರು ತಿಂಗಳ ವೇತನವನ್ನು ಪಡೆದಿರುವುದಾಗಿ ತಿಳಿಸಿ, ಮಾನ್ಯ ಅಧ್ಯಕ್ಷರಿಗೆ ವಂದನೆಗಳನ್ನು ತಿಳಿಸಿದರು. ಐದು ಮಂದಿ ಪೌರ ಕಾರ್ಮಿಕರ ವೇತನ ಪಾವತಿಯಾಗಿರುವುದಿಲ್ಲ ಎಂದು ಸ್ವತ: ಪೌರ ಕಾರ್ಮಿಕರೇ ಮಾನ್ಯ ಅಧಕ್ಷರಲ್ಲಿ ಮನವಿ ಮಾಡಿಕೊಂಡಿದ್ದು, ಕೂಡಲೇ ಕಿರಿಯ ಆರೋಗ್ಯ ಪರಿವೀಕ್ಷಕರು ಕಡತವನ್ನು ಸಿದ್ಧಪಡಿಸಿ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಕ್ರಮವಹಿಸಲು ಸೂಚಿಸುವುದಾಗಿ ನೂಡಲ್ ಅಧಿಕಾರಿಗಳು ತಿಳಿಸಿದರು.

4) ಬೀದಿ ಬದಿ ವ್ಯಾಪಾರಿಗಳ ತೆರವುಗೊಳಿಸುವ ಬಗ್ಗೆ:-

ಯಶವಂತಪುರ 1ನೇ ಮುಖ್ಯರಸ್ತೆ ಹಾಗೂ ಬಜಾರ್ ಸ್ಟ್ರೀಟ್ ರೋಡಲ್ಲಿ ಬೀದಿ ಬದಿ ವ್ಯಾಪಾರಿಗಳು ರಸ್ತೆ ಬದಿಯಲ್ಲಿ ತಮ್ಮ ತಳ್ಳುವ ಗಾಡಿಗಳನ್ನು ಇಟ್ಟು ವ್ಯಾಪಾರವನ್ನು ಮಾಡುತ್ತಿರುವುದರಿಂದ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಕೂಡಲೇ ವ್ಯಾಪಾರಿಗಳನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಮಾರ್ಷಲ್, ಮೇಲ್ವಿಚಾರಕರು ಹಾಗೂ ಗ್ಯಾಂಗ್‌ಮ್ಯಾನ್‌ಗಳಿಗೆ ತಿಳಿಸಿದರು.

5) ಕಂದಾಯ ಇಲಾಖೆ:

ಕಂದಾಯ ವಸೂಲಿಗಾರರು ಮಾತನಾಡಿ, ವಾರ್ಡ್‌ನಲ್ಲಿ ಒಟ್ಟು 89.75 ಲಕ್ಷಗಳ ಕಂದಾಯವು ಬಾಕಿ ಇರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಸಂಬಂಧಪಟ್ಟಂತೆ 157 ಕಾರಣ ಕೇಳಿ ನೋಟೀಸ್‌ಗಳನ್ನು ಇಲಾಖೆಯಿಂದ ಸ್ವತ್ತಿನ ಮಾಲೀಕರಿಗೆ ಜಾರಿ ಮಾಡಲಾಗಿದೆ. ಕಾರಣ ಕೇಳಿ ನೋಟೀಸ್‌ಗಳನ್ನು (Revised Notice) ಗಳನ್ನು ಮಾತೃಭಾಷೆಯಲ್ಲಿ ಮುದ್ರಣ ಮಾಡಲು ಕಂದಾಯ ವಸೂಲಿಗಾರರಿಗೆ ಮಾನ್ಯ ಅಧ್ಯಕ್ಷರು ನಿರ್ದೇಶಿಸಿದರು.

6) ಬೆಸ್ಕಾಂ:-

ವಾರ್ಡ್‌ನ ವಿವಿಧೆಡೆ ಸಾರ್ವಜನಿಕ ಬೋರ್‌ವೆಲ್, ಶುದ್ಧ ಕುಡಿಯುವ ನೀರಿನ ಘಟಕ, ಸಮುದಾಯ ಭವನ, ಬಿಬಿಎಂಪಿ ಆಸ್ಪತ್ರೆಗಳಲ್ಲಿ ವಿದ್ಯುತ್ ಮೀಟರ್‌ಗಳನ್ನು ಅಳವಡಿಸಲಾಗಿದ್ದು, ಇದರ ಬಿಲ್ಲಿನ ಮೊತ್ತದ ಕಡತವನ್ನು ಕೂಡಲೇ ಸಿದ್ಧಪಡಿಸಿ, ಸಂಬಂಧಪಟ್ಟ ಗುತ್ತಿಗೆದಾರರು ಅತೀ ಜರೂರಾಗಿ ಸಹಾಯಕ ಅಭಿಯಂತರರಿಗೆ ನೀಡಲು ಸಭೆಯಲ್ಲಿ ತಿಳಿಸಿದರು.

7) ಬಿಡಬ್ಲ್ಯೂಎಸ್‌ಎಸ್‌ಬಿ :

ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್‌ಗಳ ಸುತ್ತ ಹೊಸ ರಿಂಗ್‌ಗಳನ್ನು ಅಳವಡಿಸುತ್ತಿರುವುದರಿಂದ, ಸದರಿ ಕಾರ್ಯ ಮಾಡುವ ಗುತ್ತಿಗೆದಾರರು ಎಲ್ಲಾ ಕಾಮಗಾರಿ ಪೂರ್ಣಗೊಂಡ ನಂತರ ಡೆಬ್ರಿಸ್‌ಗಳನ್ನು ರಸ್ತೆಯಲ್ಲೇ ಬಿಟ್ಟಿದ್ದು ತೆರವುಗೊಳಿಸದಿರುವ ಕಾರಣ, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಕಂಡುಬಂದಿದ್ದು, ಅದರಂತೆ, ಸಭೆಗೆ ಹಾಜರಿದ್ದ, ಬಿಡಬ್ಲ್ಯೂಎಸ್‌ಎಸ್‌ಬಿ ಮೇಲ್ವಿಚಾರಕರಿಗೆ, ಸಹಾಯಕ ಅಭಿಯಂತರರ ಗಮನಕ್ಕೆ ತರಲು ತಿಳಿಸಿ, ಗುತ್ತಿಗೆದಾರರಿಗೆ ಸದರಿ ಡೆಬ್ರಿಸ್‌ಗಳನ್ನು ತುರ್ತಾಗಿ ತೆರವುಗೊಳಿಸುವಂತೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸಹಾಯಕ ಅಭಿಯಂತರರು ಹಾಗೂ<br>ಸದಸ್ಯ ಕಾರ್ಯದರ್ಶಿ<br>ವಾರ್ಡ್ ಸಂಖ್ಯೆ:37 | (ಎನ್. ಜಿ. ಉಮೇಶ್)<br>ಸ.ಕಾ.ನಿ.ಅ. ಹಾಗೂ<br>ವಾರ್ಡ್ ನೋಡಲ್ ಅಧಿಕಾರಿ<br>ವಾರ್ಡ್ ಸಂಖ್ಯೆ:37 |